# ಪೊಲೀಸ್ ಇಲಾಖೆ

## ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ವೈರ್‌ಲೆಸ್) ಹುದ್ದೆಗಳ ನೇಮಕಾತಿ

**(ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ಅಧಿಸೂಚನೆ ಸಂಖ್ಯೆ:95/ನೇಮಕಾತಿ–2/2020–21**

ವಿಷಯ: ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ವೈರ್‌ಲೆಸ್) (ಪುರುಷ ಮತ್ತು ಮಹಿಳಾ) ಮತ್ತು ಸೇವೆಯಲ್ಲಿರುವವರು ಒಳಗೊಂಡಂತೆ ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಪತ್ರ ದಿನಾಂಕ: 07.05.2020 ರಲ್ಲಿ ಪ್ರಕಟಿಸಲಾದ ಅಧಿಸೂಚನೆ ಸಂಖ್ಯೆ: 95/ನೇಮಕಾತಿ–2/2020–21.

~ ~ * ~ ~

ಉಲ್ಲೇಖಿತ ಅಧಿಸೂಚನೆಯನ್ವಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ವೈರ್‌ಲೆಸ್) (ಪುರುಷ ಮತ್ತು ಮಹಿಳಾ) ಮತ್ತು ಸೇವಾನಿರತರನ್ನೊಳಗೊಂಡ ಹುದ್ದೆಗಳ ನೇರ ನೇಮಕಾತಿ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕವನ್ನು 26.06.2020 ಸಂಜೆ 06.00 ಗಂಟೆಯವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 30.06.2020 ರಂದು ನಿಗದಿಗೊಳಿಸಲಾಗಿರುತ್ತದೆ.

ಪ್ರಸ್ತುತ ರಾಜ್ಯದಲ್ಲಿನ ಪರಿಸ್ಥಿತಿಯನ್ನು ಪರಿಗಣನೆಗೆ ತೆಗೆದುಕೊಂಡು ಅಭ್ಯರ್ಥಿಗಳ ಹಿತದೃಷ್ಟಿಯಿಂದ **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 26.06.2020 ರಿಂದ 18.07.2020 ರವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸುವ ದಿನಾಂಕವನ್ನು 30.06.2020 ರಿಂದ 21.07.2020 ರವರೆಗೆ ವಿಸ್ತರಿಸಲಾಗಿದೆ.** ಉಲ್ಲೇಖಿತ ಅಧಿಸೂಚನೆ ದಿನಾಂಕ: 07.05.2020ರಲ್ಲಿ ಈಗಾಗಲೇ ನಿಗದಿಪಡಿಸಿರುವಂತೆ ದಿನಾಂಕ: 26.06.2020ನ್ನೇ ವಯೋಮಿತಿಯ ಕೊನೆಯ ದಿನಾಂಕವನ್ನಾಗಿ ಪರಿಗಣಿಸಲಾಗುವುದು ಹಾಗೂ ಸದರಿ ಅಧಿಸೂಚನೆಯಲ್ಲಿ ನೀಡಲಾಗಿರುವ ಇತರೆ ಅರ್ಹತಾ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಸಹಿ/–

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,<br>
ನೇಮಕಾತಿ ಹಾಗೂ ಅಧ್ಯಕ್ಷರು,<br>
ಪಿ.ಎಸ್.ಐ (ವೈರ್‌ಲೆಸ್) ನೇಮಕಾತಿ ಸಮಿತಿ,<br>
ಕಾರ್ಲಟನ್ ಭವನ, ಅರಮನೆ ರಸ್ತೆ,<br>
ಬೆಂಗಳೂರು–560 001.